9. ಶಾಸನ ರಚನೆ

ವಿಧೇಯಗಳ ಮಂಡನೆ ಹಾಗೂ ಪರ್ಯಾಲೋಚನೆ

(ಅ) ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2005

ಮಂಡನೆ ಅನುಮತಿ ಕೋರಿಕೆ

***ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿ):** ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2005ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ವಿಧೇಯಕದ ಮಂಡನೆ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿ): ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ–1

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿ): ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ"

ಪ್ರಸ್ತಾಪ ಮಂಡಿಸಲ್ಪಟ್ಟಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೆ, ಈ ವಿಧೇಯಕವನ್ನು ಚರ್ಚೆಗೆ ತೆಗೆದುಕೊಳ್ಳುವ ಮುನ್ನ ತಂದಿರುವ ತಿದ್ದುಪಡಿಯನ್ನು ನಾವು ನೋಡಿಕೊಂಡು ಬರುತ್ತೇವೆ. ಇದರಲ್ಲಿ ಹಣಕಾಸಿಗೆ ಸಂಬಂಧಿಸಿದಂತೆ ಅನೇಕ ವಿಷಯಗಳನ್ನು ಸರ್ಕಾರದ ಗಮನಕ್ಕೆ ತರಬೇಕಾಗಿದೆ. ವಿಧೇಯಕವನ್ನು ಇವೊತ್ತೇ ಮಂಡಿಸಿ, ಇವೊತ್ತೇ ಚರ್ಚೆಗೆ ತೆಗೆದುಕೊಳ್ಳುವುದು ಸರಿಯಲ್ಲ. ನಾಳೆ ಚರ್ಚೆಗೆ ತೆಗೆದುಕೊಳ್ಳಿ. ಇದು ಪ್ರಮುಖ ವಿಧೇಯಕ ವಾಗಿರುವುದರಿಂದ ಈ ಕುರಿತಾದ ಚರ್ಚೆಗೆ ತಾವು ಅವಕಾಶ ಮಾಡಿಕೊಡಬೇಕು. ಚರ್ಚೆಯಾದ ಬಳಿಕ ನಾಳೆ ಈ ವಿಧೇಯಕವನ್ನು ಪಾಸ್ ಮಾಡಿಕೊಡೋಣ. ನಮ್ಮದೇನೂ ಅಭ್ಯಂತರವಿಲ್ಲ.

ಶ್ರೀ ಸಿದ್ದರಾಮಯ್ಯ: ಇದರ ಬಗ್ಗೆ ಚರ್ಚಿಸಬೇಕಾದ ಅಗತ್ಯವೇನೂ ಇಲ್ಲ. ಮೌಲ್ಯವರ್ಧಿತ ತೆರಿಗೆ ವಿಧೇಯಕವನ್ನು 2003ರಲ್ಲಿಯೇ ಅಂಗೀಕರಿಸಲಾಗಿದೆ. ನೀವೆಲ್ಲರೂ ಇದ್ದಾಗಲೇ ಈ ವಿಧೇಯಕವನ್ನು ಪಾಸ್ ಮಾಡಿಕೊಟ್ಟಿದ್ದೀರಿ. Empowered Committeeಯಲ್ಲಿ ಕೆಲವು ಸಲಹೆಗಳನ್ನು ಸೂಚಿಸಿದ್ದು ಅದನ್ನು ವಿಧೇಯಕಕ್ಕೆ ತಿದ್ದುಪಡಿ ಮೂಲಕ ತರಲಾಗಿದೆ ಅಷ್ಟೆ.

---

* ಈ ಭಾಷಣವು ಮಾನ್ಯ ಉಪ ಮುಖ್ಯಮಂತ್ರಿಯವರಿಂದ ಪರಿಷ್ಕರಿಸಲ್ಪಟ್ಟಿದೆ.